**ಬಂಟ್ವಾಳ 1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಯವರ ನ್ಯಾಯಾಲಯದಲ್ಲಿ**

ಸಿಸಿ ನಂ. 92/2022

ಫ್ರಾಸಾ : 07

**ಚಾಸಾ : 19**

| | | |
|---|---|---|
| ಸಾಕ್ಷಿದಾರನ ಹೆಸರು | ಃ | ವಿವೇಕಾನಂದ |
| **ತಂದೆಯ ಹೆಸರು** | ಃ | **ಡಿ ಚಂದ್ರಶೇಖರ ಗೌಡ** |
| **ಪ್ರಾಯ** | ಃ | **53 ವರ್ಷ** |
| **ಉದ್ಯೋಗ** | ಃ | **ಪಿ ಐ,** ವಿವಿ ಪುರಂ ಮೈಸೂರು |
| **ವಾಸಸ್ಥಳ** | ಃ | ಮೈಸೂರು |

**ದಿನಾಂಕ: 07.07.2026 ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು.**

**ಮುಖ್ಯ ವಿಚಾರಣೆ : ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರಿಂದ:**

ನಾನು ಅಕ್ಟೋಬರ್ 2021 ರಿಂದ ಆಗಸ್ಟ 2023 ರ ರವರೆಗೆ ಬಂಟ್ವಾಳ ನಗರ ಠಾಣೆಯಲ್ಲಿ ಪೊಲೀಸ್ ನಿರೀಕ್ಷಕನಾಗಿ ಕರ್ತವ್ಯ ನಿರ್ವಹಿಸಿರುತ್ತೇನೆ.

2. ದಿನಾಂಕ 23.11.2021 ರಂದು ಪ್ರಕರಣದ ಕಡತವನ್ನು ಪೊಲೀಸ್ ನಿರೀಕ್ಷಕರಾದ ಟಿ ಡಿ ನಾಗರಾಜ್ ರವರಿಂದ ಪಡೆದುಕೊಂಡಿರುತ್ತೇನೆ. ಅದೇ ದಿನ KA-20-EH-7009 ಬೈಕ್ ನ ಆರ್ ಸಿ ಮಾಲೀಕರಾದ ಚಾಸಾ-11 ರವರಿಗೆ ಕಲಂ 133 ಮೋ ವಾ ಕಾಯ್ದೆ ಅಡಿಯಲ್ಲಿ ಪೊಲೀಸ್ ನೋಟಿಸ್ ನ್ನು ನೀಡಿ ಅದೇ ದಿನ ಚಾಸಾ-11 ರವರಿಂದ ಉತ್ತರ ಮತ್ತು ದಾಖಲಾತಿಗಳನ್ನು ಪಡೆದುಕೊಂಡಿರುತ್ತೇನೆ. ನಂತರ ನಷ್ಟ ಭರ್ತಿ ಮುಚ್ಚಳಿಕೆ ಪತ್ರದ ಮೂಲಕ ವಾಹನವನ್ನು ಬಿಡುಗಡೆ ಮಾಡಿರುತ್ತೇನೆ. ಸಾಕ್ಷಿಗೆ ಈಗಾಗಲೇ ಗುರುತಿಸಲಾದ ನಿಪಿ-17 ರಿಂದ ನಿಪಿ-19 ದಾಖಲೆಗಳನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ಇರುವ ತನ್ನ ಸಹಿಗಳನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಗಳನ್ನು **ನಿಪಿ-17(ಎ) ರಿಂದ ನಿಪಿ-19(ಎ)** ಎಂದು

ಗುರುತಿಸಲಾಯಿತು. ಅದೇ ದಿನ ಗಾಯಾಳು ಆದ ಚಾಸಾ-2 ರವರ ಹೇಳಿಕೆಯನ್ನು ಪಡೆದುಕೊಡಿಂರುತ್ತೇನೆ.

3. ದಿನಾಂಕ 06.12.2021 ರಂದು ಚಾಸಾ-2 ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ-13 ರವರಿಂದ ಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಈಗಾಗಲೇ ಗುರುತಿಸಲಾದ ನಿಪಿ-21 ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು **ನಿಪಿ-21(ಎ)** ಎಂದು ಗುರುತಿಸಲಾಯಿತು. ಅದೇ ದಿನ ಮೃತ ಮೊಹಮ್ಮದ ಅಜೀಮ್ ರವರ ಪಿ ಎಮ್ ವರದಿಯನ್ನು ಮಂಗಳೂರಿನ ವೆನ್ಲಾಕ್ ಆಸ್ಪತ್ರೆಯಿಂದ ಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಈಗಾಗಲೇ ಗುರುತಿಸಲಾದ ನಿಪಿ-23 ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು **ನಿಪಿ-23(ಎ)** ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ-12 ರವರಿಂದ ಐ ಎಮ್ ವಿ ವರದಿಯನ್ನು ಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಈಗಾಗಲೇ ಗುರುತಿಸಲಾದ ನಿಪಿ-20 ದಾಖಲೆಯನ್ನು ತೋರಿಸಲಾಗಿ ಸಾಕ್ಷಿಯು ಅದರಲ್ಲಿ ಇರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಸಾಕ್ಷಿಯ ಸಹಿಯನ್ನು **ನಿಪಿ-20(ಎ)** ಎಂದು ಗುರುತಿಸಲಾಯಿತು. ಅದೇ ದಿನ ಚಾಸಾ-15 ರವರಿಂದ ಕಲಂ 65(ಬಿ) ಭಾರತೀಯ ಸಾಕ್ಷ್ಯತ್ವ ಅಧೀನಿಯಮದ ಬಗ್ಗೆ ದೃಡ ಪತ್ರವನ್ನು ಪಡೆದುಕೊಂಡಿರುತ್ತೇನೆ. ಸಾಕ್ಷಿಗೆ ಕಲಂ 65(ಬಿ) ಭಾರತೀಯ ಸಾಕ್ಷ್ಯತ್ವ ಅಧೀನಿಯಮದ ದೃಡಪತ್ರವನ್ನು ತೋರಿಸಲಾಗಿ ಸಾಕ್ಷಿಯನ್ನು ಅದನ್ನು ಹಾಗೂ ಅದರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು **ನಿಪಿ-26** ಎಂದು ಮತ್ತು ಸಾಕ್ಷಿಯ ಸಹಿಯನ್ನು **ನಿಪಿ-26(ಎ)** ಎಂದು ಗುರುತಿಸಲಾಯಿತು. ಅದೇ ದಿನ ತನಿಖೆಯನ್ನು ಪೂರ್ಣಗೊಂಡಿದ್ದು ಆರೋಪಿತರ ವಿರುದ್ಧ ಆರೋಪವು ಸಾಭೀತಾದ ಕಾರಣ ಮಾನ್ಯ ನ್ಯಾಯಾಲಯಕ್ಕೆ ದೋಷಾರೋಪಣೆ ಪಟ್ಟಿಯನ್ನು ಸಲ್ಲಿಸಿರುತ್ತೇನೆ.

**<u>ಪಾಟೀ ಸವಾಲುಃ ಆರೋಪಿ ಪರಃ ಶ್ರೀ ಯು ಕೆ ವಾಯ್ ವಕೀಲರಿಂದಃ</u>**

4. ಚಾಸಾ-2 ರವರು ನನ್ನ ಮುಂದೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಯಾವುದೇ ದಾಖಲೆಗಳನ್ನು ನಾನು ಸ್ವೀಕರಿಸಿರುವುದಿಲ್ಲ ಎಂದರೆ ಸರಿಯಲ್ಲ. ಈ ಪ್ರಕರಣದ ತನಿಖೆಯನ್ನು ಸರಿಯಾಗಿ ಮಾಡದೇ ಆರೋಪಿಯ ವಿರುದ್ಧ ಸುಳ್ಳು ದೋಷಾರೋಪಣಾ ಪಟ್ಟಿಯನ್ನು ಮಾನ್ಯ ನ್ಯಾಯಾಲಯಕ್ಕೆ ಸಲ್ಲಿಸಿರುತ್ತೇನೆ ಎಂದರೆ ಸರಿಯಲ್ಲ. ಈ ಪ್ರಕರಣಕ್ಕೂ ಹಾಗೂ ಆರೋಪಿಗೂ ಯಾವುದೇ ಸಂಬಂಧವಿಲ್ಲ ಎಂದರೆ ಸರಿಯಲ್ಲ.

ಮರುವಿಚಾರಣೆಃ ಇಲ್ಲ

ನನ್ನ ಉಕ್ತಲೇಖನಾ ರೀತ್ಯಾ ತೆರೆದ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓದಿ ಹೇಳಲಾಗಿ ಕೇಳಿ ಸರಿ ಇದೆ.

1 ನೇ ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಪ್ರದನ್ಯಾದಂ,

ಬಂಟ್ವಾಳ